ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಸದಸ್ಯರ ಹೆಸರು	:	ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	339
ಉತ್ತರಿಸಬೇಕಾದ ದಿನಾಂಕ	:	23.09.2020
ಉತ್ತರಿಸಬೇಕಾದ ಸಚಿವರು	:	ವಸತಿ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ವಿವಿಧ ವಸತಿ ಯೋಜನೆಗಳು ಅರ್ಧಕ್ಕೆ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ರಾಜ್ಯದಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಅಂದರೆ 2019-20 ನೇ ಸಾಲಿನಿಂದ ಯಾವುದೇ ವಸತಿ ಯೋಜನೆಗಳು ಅರ್ಧಕ್ಕೆ ನಿಂತು ಹೋಗಿರುವುದಿಲ್ಲ, ಹಾಗೂ ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
(ಆ)	ಬಂದಿದ್ದಲ್ಲಿ, ಈ ಯೋಜನೆಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಹಮ್ಮಿಕೊಂಡಿರುವ ಕಾರ್ಯ ಕ್ರಮಗಳೇನು ?	ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿರುವ ವಿವಿಧ ವಸತಿ ಯೋಜನೆಗಳಡಿ ಸರ್ಕಾರದ ಸಹಾಯಧನ ಪಡೆದು ಫಲಾನುಭವಿಗಳೇ ಸ್ವತ: ಮನೆಗಳನ್ನು ನಿರ್ಮಿಸಿಕೊಳ್ಳುತ್ತಿರುವುದರಿಂದ ಮನೆಗಳ ನಿರ್ಮಾಣದಲ್ಲಿ ವಿಳಂಭವಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ. ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ಅಂದರೆ 2019-20 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ) ಮತ್ತು ದೇವರಾಜು ಅರಸು ಯೋಜನೆಗಳಡಿ ಒಟ್ಟು 39,759 ಮನೆಗಳನ್ನು ಮಂಜೂರು ಮಾಡಲಾಗಿದೆ. ಆ ಪೈಕಿ 395 ಮನೆಗಳು ಪೂರ್ಣಗೊಂಡಿದ್ದು, 12,317 ಮನೆಗಳು ಪ್ರಗತಿಯಲ್ಲಿದ್ದು, 26,689 ಮನೆಗಳು ಪ್ರಾರಂಭವಾಗಬೇಕಾಗಿರುತ್ತದೆ. ನಿಗದಿತ ಅವಧಿಯಲ್ಲಿ ಪ್ರಾರಂಭ ಮಾಡಿಕೊಳ್ಳದ 358 ಮನೆಗಳನ್ನು ರದ್ದುಪಡಿಸಲಾಗಿದೆ. ಕೇಂದ್ರ ಪುರಸ್ಕೃತ ಯೋಜನೆಯಾದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) 2020-21 ನೇ ಸಾಲಿನಲ್ಲಿ ರಾಜ್ಯಕ್ಕೆ ಒಟ್ಟು 1,51,715 ಮನೆಗಳ ಗುರಿಯನ್ನು ನೀಡಲಾಗಿದೆ. ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ 2019-20 ರಿಂದ ಇಲ್ಲಿಯವರೆಗೆ ಒಟ್ಟು 879 ಗುಂಪು ಮನೆಗಳ (AHP) ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಅನುಮೋದನೆ ನೀಡಲಾಗಿದೆ. ಕಳೆದ ಒಂದು ವರ್ಷದಲ್ಲಿ ಒಟ್ಟು 17,966 ಗುಂಪು ಮನೆಗಳು ಪೂರ್ಣಗೊಂಡಿರುತ್ತವೆ(ಹಿಂದಿನ ಶ್ರೇಣಿಗಳಲ್ಲಿ ಕಾಮಗಾರಿ ಚಾಲ್ತಿಯಲ್ಲಿದ್ದ ಮನೆಗಳೂ ಸೇರಿದಂತೆ). ಗುಂಪು ಮನೆಗಳ ನಿರ್ಮಾಣಕ್ಕೆ ಈಗಾಗಲೇ ಅನುಮೋದನೆಗೊಂಡು ಪ್ರಗತಿಯಲ್ಲಿರುವ 39,438 ಮನೆಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ.

		ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ BLC ಹಾಗೂ AHP ಯೋಜನೆಗಳಡಿ ಅನುಮೋದನೆಗೊಂಡಿರುವ ಹಾಗೂ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ

ವಇ 273 ಹೆಚ್‌ಎಎಂ 2020

(ವಿ.ಸೋಮಣ್ಣ)
ವಸತಿ ಸಚಿವರು